ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/127/ಪ್ರಾಹುಸ್ಸೃ/ಬಸ್ಥಾವಿ/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 25.10.2018

## ಸುತ್ತೋಲೆ

ವಿಷಯ : ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಪ್ರಾಧ್ಯಾಪಕರ (ಪ್ರೊಫೆಸರ್) ಹುದ್ದೆಗಳಿಗೆ ಅರ್ಹ ಸಹ ಪ್ರಾಧ್ಯಾಪಕರನ್ನು ಅರ್ಹತೆ ಆಧಾರದ ಮೇಲೆ ಆಯ್ಕೆ ಮುಖಾಂತರ ಪದೋನ್ನತಿಗೊಳಿಸುವ ಬಗ್ಗೆ.

ಉಲ್ಲೇಖ : ಈ ಕಛೇರಿ ದಿನಾಂಕ : 16.10.2018ರ ಸಮಸಂಖ್ಯೆಯ ಸುತ್ತೋಲೆ.

** ** **

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಸಹ ಪ್ರಾಧ್ಯಾಪಕರಿಗೆ ಪ್ರಾಧ್ಯಾಪಕರಾಗಿ ಸ್ಥಾನೀಕರಣ / ಪದೋನ್ನತಿ ನೀಡುವ ಸಂಬಂಧ ಪ್ರಸ್ತಾವನೆಗಳನ್ನು ದಿನಾಂಕ: 03.11.2018ರೊಳಗಾಗಿ ಈ ಕಛೇರಿಗೆ ಕಳುಹಿಸಿಕೊಡುವಂತೆ ಉಲ್ಲೇಖಿತ ಈ ಕಛೇರಿ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಪ್ರಸ್ತುತ ಪ್ರಸ್ತಾವನೆ ಸಲ್ಲಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕವನ್ನು ದಿನಾಂಕ: 17.11.2018 ರವರೆಗೂ ವಿಸ್ತರಿಸಲಾಗಿದೆ. ನಿಗದಿಪಡಿಸಿದ ದಿನಾಂಕದ ನಂತರ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – **ಅಗತ್ಯ ತುರ್ತು ಕ್ರಮಕ್ಕಾಗಿ.**
2. ಎಲ್ಲಾ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ಮಾಹಿತಿಗಾಗಿ.

**ಪ್ರತಿಯನ್ನು :**

1. ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮೇಲ್ಕಂಡ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.
2. ಕಛೇರಿ ಪ್ರತಿ

*DCE-127-Prin Post Creatn-2016-17.docx*